All India Radio: Bangalore
National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

26.02.2025 19.35 P.M.

<><><><>

ಮುಖ್ಯಾಂಶಗಳು

- ದೇಶದೆಲ್ಲೆಡೆ ಶ್ರದ್ಧಾ-ಭಕ್ತಿಗಳಿಂದ ಮಹಾಶಿವರಾತ್ರಿ ಆಚರಣೆ : ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರ ಶುಭಾಶಯ
- ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭಮೇಳ ಇಂದು ಸಂಪನ್ನ
- ಬಿಹಾರದ ನಿತೀಶ್ ಕುಮಾರ್ ನೇತೃತ್ವದ ಸಚಿವ ಸಂಪುಟ ವಿಸ್ತರಣೆ : ೭ ಹೊಸ ಸಚಿವರ ಸೇರ್ಪಡೆ
- ಸುಡಾನ್‌ನಲ್ಲಿ ಸೇನಾ ವಿಮಾನ ಅಪಘಾತ ; ೪೬ ಮಂದಿ ಸಾವು
- ಮಹಿಳಾ ಟಿ-೨೦ ಪ್ರೀಮಿಯರ್ ಲೀಗ್‌ನಲ್ಲಿಂದು ಮುಂಬೈ ಇಂಡಿಯನ್ಸ್-ಯುಪಿ ವಾರಿಯರ್ಸ್ ಹಣಾಹಣಿ

<><><><>

ಇಂದು ಮಹಾಶಿವರಾತ್ರಿ ಹಬ್ಬವನ್ನು ದೇಶದೆಲ್ಲೆಡೆ ಧಾರ್ಮಿಕ ಉತ್ಸಾಹ ಹಾಗೂ ಶ್ರದ್ಧಾ-ಭಕ್ತಿಗಳಿಂದ ಆಚರಿಸಲಾಗುತ್ತಿದೆ. ಗುಜರಾತ್‌ನ ಸೋಮನಾಥದಲ್ಲಿರುವ ಮಹದೇವ ದೇಗುಲ, ದ್ವಾರಕದ ನಾಗೇಶ್ವರ ದೇಗುಲ ಹಾಗೂ ರಾಜ್ಯದ ಪ್ರಮುಖ ಇತರ ಶಿವ ದೇವಾಲಯಗಳಿಗೆ ಹೆಚ್ಚಿನ ಸಂಖ್ಯೆಯ ಭಕ್ತರು ಮುಂಜಾನೆಯಿಂದಲೇ ಭೇಟಿ ನೀಡಿ, ಪೂಜೆ ಸಲ್ಲಿಸುತ್ತಿದ್ದಾರೆ. ಭಕ್ತಾದಿಗಳಿಗೆ ಸೋಮನಾಥ ದೇಗುಲದಲ್ಲಿ ವಿಶೇಷ ವ್ಯವಸ್ಥೆ ಮಾಡಲಾಗಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ಸೋಮನಾಥದಲ್ಲಿ ಮಹಾಶಿವರಾತ್ರಿ ವಿಶೇಷವಾಗಿದ್ದು, ಬೆಳಗಿನ ಜಾವ ೪ ಗಂಟೆಯಿಂದಲೇ ಪೂಜಾ ಕೈಂಕರ್ಯಗಳು ಆರಂಭಗೊಂಡಿದ್ದವು. ಉತ್ತರಪ್ರದೇಶದಲ್ಲಿ ವಾರಾಣಸಿಯ ಕಾಶಿ ವಿಶ್ವನಾಥಧಾಮ ಸೇರಿದಂತೆ ಎಲ್ಲ ಶಿವ ದೇಗುಲಗಳಿಗೆ ಭಕ್ತಾದಿಗಳು ಬೆಳಗ್ಗೆಯಿಂದಲೇ ತೆರಳಿ ಭಗವಾನ್ ಶಿವನಿಗೆ ಜಲ ಅಭಿಷೇಕ ನಡೆಸುತ್ತಿದ್ದಾರೆ. ಕಾಶಿಯಲ್ಲಿ ಮಹಾಶಿವರಾತ್ರಿ ಅಂಗವಾಗಿ ವಿಶೇಷ ಸಿದ್ಧತೆಗಳನ್ನು ನಡೆಸಲಾಗಿದೆ. ದರ್ಶನ ಹಾಗೂ ಪೂಜೆಯ ಜೊತೆಗೆ ಏಳು ಅಖಾಡಗಳ ಮೆರವಣಿಗೆ ಸಹ ಆಯೋಜಿಸಲಾಗಿದೆ. ಮಹಾಶಿವರಾತ್ರಿಯ ಅಂಗವಾಗಿ ಜಾರ್ಖಂಡ್‌ನಲ್ಲಿರುವ ೧೨ ಜ್ಯೋತಿರ್ಲಿಂಗಗಳಲ್ಲಿ ಒಂದಾದ ಡಿಯೋಗಢದ ಬಾಬಾಬೈದ್ಯನಾಥ ಧಾಮದಲ್ಲಿ ಶಿವನ ಭವ್ಯ ಮೆರವಣಿಗೆ ಆಯೋಜಿಸಲಾಗಿದೆ. ಡಿಯೋಗಢ ನಗರವನ್ನು ಬಣ್ಣದ ದೀಪಗಳಿಂದ ಅಲಂಕರಿಸಲಾಗಿದ್ದು, ರಾಜ್ಯ ಪ್ರವಾಸೋದ್ಯಮ ಇಲಾಖೆ ಇದೇ ಮೊದಲ ಬಾರಿಗೆ ಈ ವರ್ಷ ಶಿವರಾತ್ರಿ ಉತ್ಸವವನ್ನು ಆಯೋಜಿಸಿದೆ. ಮುಖ್ಯಮಂತ್ರಿ ಹೇಮಂತ್ ಸುರೇನ್ ಇಂದು ಸಂಜೆ

ಡಿಯೋಗಢದ ಕೆಕೆಎನ್ ಕ್ರೀಡಾಂಗಣದಲ್ಲಿ ಮಹಾಶಿವರಾತ್ರಿಯನ್ನು ಉದ್ಘಾಟಿಸಲಿದ್ದಾರೆ. ಮಹಾರಾಷ್ಟ್ರದಲ್ಲಿ ಜನರು ಶಿವನ ದೇಗುಲಗಳಿಗೆ ಭೇಟಿ ನೀಡಿ, ವಿಶೇಷ ಪೂಜೆ ನಡೆಸುತ್ತಿದ್ದಾರೆ. ಮಹಾಶಿವರಾತ್ರಿಯನ್ನು ರಾಜ್ಯದಲ್ಲಿ ಪಾನನಿಷೇಧ ದಿನ ಎಂದು ಆಚರಿಸಲಾಗುತ್ತಿದೆ. ಮದ್ಯ ಮಾರಾಟವನ್ನು ನಿಷೇಧಿಸಲಾಗಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಮಹಾಶಿವರಾತ್ರಿಯ ಅಂಗವಾಗಿ ದೇಶದ ಜನತೆಗೆ ಶುಭ ಕೋರಿದ್ದಾರೆ. ಮಹಾಶಿವರಾತ್ರಿಯ ಶುಭ ಸಂದರ್ಭದಲ್ಲಿ ದೇಶದ ಜನತೆಗೆ ನನ್ನ ಹೃತ್ಪೂರ್ವಕ ಶುಭಾಶಯಗಳು. ಪರಮಾತ್ಮ ಮಹದೇವನ ಆಶೀರ್ವಾದ ನಮ್ಮೆಲ್ಲರ ಮೇಲೆ ಇರಲಿ. ದೇಶವು ಪ್ರಗತಿಯ ಪಥದಲ್ಲಿ ಮುಂದುವರೆಯಲಿ ಎಂದು ಪ್ರಾರ್ಥಿಸಿದ್ದಾರೆ. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಮಹಾಶಿವರಾತ್ರಿಯ ಸಂದರ್ಭದಲ್ಲಿ ದೇಶದ ಜನತೆಗೆ ಶುಭ ಕೋರಿದ್ದಾರೆ. ಪವಿತ್ರ ಹಬ್ಬವು ಆತ್ಮಾವಲೋಕನ ಹಾಗೂ ಆಧ್ಯಾತ್ಮಿಕ ಅರಿವಿನ ಸಂಕೇತವಾಗಿದ್ದು, ಇದು ಜನರನ್ನು ಜ್ಞಾನ, ತಾಳ್ಮೆ ಹಾಗೂ ಕರುಣೆಯ ಮಾರ್ಗವನ್ನು ಅನುಸರಿಸಲು ಪ್ರೇರೇಪಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು, ದೇಶದ ಜನತೆಗೆ ಮಹಾಶಿವರಾತ್ರಿಯ ಶುಭಾಶಯಗಳನ್ನು ಕೋರಿದ್ದಾರೆ. ಶಿವನಿಗೆ ಸಮರ್ಪಿತವಾದ ಈ ದೈವಿಕ ಸಂದರ್ಭವು ಜನರಿಗೆ ಸಂತೋಷ, ಸಮೃದ್ಧಿ ಹಾಗೂ ಉತ್ತಮ ಆರೋಗ್ಯವನ್ನು ತರಲಿ ಎಂದು ಹಾರೈಸಿದ್ದಾರೆ. ಮಹಾಶಿವರಾತ್ರಿ ಅಭಿವೃದ್ಧಿ ಹೊಂದಿದ ಭಾರತದ ಸಂಕಲ್ಪವನ್ನು ಬಲಪಡಿಸುತ್ತದೆ ಎಂದು ಪ್ರಧಾನಿ ಆಶಯ ವ್ಯಕ್ತಪಡಿಸಿದ್ದಾರೆ. ಮಧ್ಯಪ್ರದೇಶದಲ್ಲಿ ಮಹಾಶಿವರಾತ್ರಿಯ ಸಂದರ್ಭದಲ್ಲಿ ಎಲ್ಲ ಪ್ರಮುಖ ದೇವಾಲಯಗಳಲ್ಲಿ ಭಕ್ತರು ಜಮಾಯಿಸಿದ್ದಾರೆ. ಜ್ಯೋತಿರ್ಲಿಂಗ ಮಹಾಕಾಳೇಶ್ವರ, ಓಂಕಾರೇಶ್ವರದಲ್ಲಿ ಇಂದು ಮುಂಜಾನೆಯಿಂದಲೇ ಭಕ್ತರ ಉದ್ದನೆಯ ಸಾಲುಗಳು ಕಂಡುಬಂದವು.

<><><><>

ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ವಿಶ್ವದ ಅತಿದೊಡ್ಡ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಮೇಳ ಮಹಾಕುಂಭ ಮಹಾಶಿವರಾತ್ರಿಯ ಶುಭದಿನವಾದ ಇಂದು ಸಮಾಪನಗೊಳ್ಳಲಿದೆ. ದೇಶಾದ್ಯಂತ ಯಾತ್ರಿಕರು ಇಂದು ಬೆಳಗಿನಜಾವದಿಂದಲೇ ಪ್ರಯಾಗ್‌ರಾಜ್‌ನ ಸಂಗಮ ಹಾಗೂ ಇತರ ಘಾಟ್‌ಗಳಲ್ಲಿ ಪುಣ್ಯಸ್ನಾನ ಆರಂಭಿಸಿದರು. ಜನವರಿ ೧೩ರಂದು ಆರಂಭಗೊಂಡ ಮಹಾಕುಂಭಮೇಳವು ೬ ವಾರಗಳಲ್ಲಿ ಈವರೆಗೆ ೬೫ ಕೋಟಿ ೬೦ಲಕ್ಷಕ್ಕೂ ಹೆಚ್ಚು ಶ್ರದ್ಧಾಳುಗಳನ್ನು ಸೆಳೆದಿದ್ದು, ಇದು ವಿಶ್ವದ ಅತಿದೊಡ್ಡ ಮಾನವೀಯ ಮೇಳವಾಗಿದೆ. ೧೪೪ ವರ್ಷಗಳಿಗೊಮ್ಮೆ ಮಾತ್ರ ಸಂಭವಿಸುವಂತಹ ಅಪರೂಪದ ಖಗೋಳ ಜೋಡಣೆಯ ಈ ವರ್ಷ ಮಹಾಕುಂಭದ ವಿಶೇಷತೆಯನ್ನು ಹೆಚ್ಚಿಸಿದೆ. ಈ ಕಾರ್ಯಕ್ರಮದ ಬಗ್ಗೆ ವರದಿ ಮಾಡುತ್ತಿರುವ ನಮ್ಮ ಬಾತ್ಮೀದಾರರು ಕುಂಭಮೇಳವನ್ನು ಸುರಕ್ಷಿತ, ಭದ್ರತಾ ಹಾಗೂ ಸ್ಮರಣೀಯವಾಗಿಸಲು ಅಧಿಕಾರಿಗಳು ವಿಶೇಷ ವ್ಯವಸ್ಥೆಗಳನ್ನು ಮಾಡಿದ್ದಾರೆ. ರೈಲು ನಿಲ್ದಾಣಗಳು, ರಸ್ತೆಗಳು ಹಾಗೂ ನಗರ ಪ್ರವೇಶ ದ್ವಾರಗಳು ಭಕ್ತಾದಿಗಳ ನಿರಂತರ ಒಳ ಹರಿವಿಗೆ

ಸಾಕ್ಷಿಯಾಗುತ್ತಿದೆ ಎಂದು ತಿಳಿಸಿದ್ದಾರೆ. ಪ್ರಮುಖ ಸ್ಥಳಗಳಲ್ಲಿ ಸಂಚಾರವನ್ನು ಕಟ್ಟುನಿಟ್ಟಾಗಿ ನಿಯಂತ್ರಿಸಲಾಗುತ್ತಿದೆ. ಜನ ದಟ್ಟಣೆ ತಪ್ಪಿಸಲು ಪುಣ್ಯಸ್ನಾನ ಪೂರೈಸಿದವರನ್ನು ಸ್ಥಳದಿಂದ ಹೊರಡುವಂತೆ ಸೂಚಿಸಲಾಗುತ್ತಿದೆ. ಸ್ನಾನ ಘಾಟ್‌ಗಳಲ್ಲಿ ಹೆಚ್ಚಿನ ಭದ್ರತೆ ಹಾಗೂ ಯಾವುದೇ ಅಪಘಾತಗಳು ಸಂಭವಿಸದಂತೆ ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್, ಗೃಹರಕ್ಷಕ ದಳ ಹಾಗೂ ಪೊಲೀಸರು ನಿಗಾ ವಹಿಸುತ್ತಿದ್ದಾರೆ.

ವೈಮಾನಿಕ ತಂಡವು ಕುಂಭಮೇಳದ ಮೈದಾನವನ್ನು ಸಹ ಮೇಲ್ವಿಚಾರಣೆ ನಡೆಸುತ್ತಿದೆ. ರೇಡಿಯೋ ಕಾರ್ಯಕ್ರಮಗಳು, ಮಾಹಿತಿ ಮತ್ತು ಸುದ್ದಿಗಳನ್ನು ಧ್ವನಿವರ್ಧಕಗಳ ಮೂಲಕ ಪ್ರಸಾರ ಮಾಡಿ, ಜಾಗೃತಿ ಮೂಡಿಸುವ ಜೊತೆಗೆ ತಪ್ಪು ಮಾಹಿತಿ ಪ್ರಸಾರವಾಗದಂತೆ ತಡೆಯಲಾಗುತ್ತಿದೆ. ಇದಲ್ಲದೇ ಮಹಾಶಿವರಾತ್ರಿಯ ಕಾರಣ ೪ ಸಾವಿರದ ೫೦೦ ಬಸ್‌ಗಳನ್ನು ಸಂಚಾರಕ್ಕೆ ಬಿಡಲಾಗಿದೆ. ಪ್ರಯಾಣಿಕರು ಪ್ರತಿ ೧೦ ನಿಮಿಷಕ್ಕೆ ಬಸ್ ಸೇವೆಗಳನ್ನು ಪಡೆಯಬಹುದಾಗಿದೆ. ೭೫೦ ಶಟಲ್ ಬಸ್‌ಗಳನ್ನು ಸಹ ನಿಯೋಜಿಸಲಾಗಿದೆ.

<><><><>

ಸಾಂಸ್ಕೃತಿಕ ಪರಂಪರೆ ಸಂರಕ್ಷಿಸುವಲ್ಲಿ ಉತ್ಸವ ಹಬ್ಬಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ. ಅರುಣಾಚಲ ಪ್ರದೇಶದ ಕಾಮ್ಲೆ ಜಿಲ್ಲೆಯ ಬೋಸ್ಲಿಮಾದಲ್ಲಿ ನಡೆದ ಮೊದಲ ಜಂಟಿ ಮೆಗ ನ್ಯೂಕುಮ್ ಯುಲ್ಲೊ ಆಚರಣೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಭಾರತ ತ್ವರಿತ ಗತಿಯಲ್ಲಿ ಪ್ರಗತಿ ಸಾಧಿಸುತ್ತಿದ್ದು, ವಿಶ್ವದಲ್ಲೇ ಅತ್ಯಂತ ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ದೇಶವಾಗಿದೆ. ಆರ್ಥಿಕ ಬೆಳವಣಿಗೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಸಮಾಜ ಕಲ್ಯಾಣ ಯೋಜನೆಗಳಲ್ಲಿ ದೇಶ ಗಮನಾರ್ಹ ಪ್ರಗತಿ ಸಾಧಿಸಿದ್ದು, ಈ ವಲಯಗಳಲ್ಲಿ ಇತರ ಎಲ್ಲ ರಾಷ್ಟ್ರಗಳನ್ನು ಹಿಂದಿಟ್ಟು ಮುಂದೆ ಸಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು. ಅರುಣಾಚಲ ಪ್ರದೇಶದ ಜಲವಿದ್ಯುತ್ ಉತ್ಪಾದನಾ ಸಾಮರ್ಥ್ಯದ ಬಗ್ಗೆ ಪ್ರಸ್ತಾಪಿಸಿದ ಉಪರಾಷ್ಟ್ರಪತಿಯವರು ರಾಜ್ಯ ೫೦ ಸಾವಿರ ಮೆಗಾವ್ಯಾಟ್ ವಿದ್ಯುತ್ ಉತ್ಪಾದನಾ ಸಾಮರ್ಥ್ಯ ಹೊಂದಿದೆ. ಒಂದು ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸಲು ೧೦ ಕೋಟಿ ರೂಪಾಯಿ ವೆಚ್ಚದ ಅಗತ್ಯವಿದೆ. ರಾಜ್ಯದ ಜಲವಿದ್ಯುತ್ ವಲಯದಲ್ಲಿ ೫ ಲಕ್ಷ ಕೋಟಿ ರೂಪಾಯಿಗಳ ಬೃಹತ್ ಹೂಡಿಕೆಗೆ ಕಾರಣವಾಗುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಕೇಂದ್ರ ಸಂಸದೀಯ ವ್ಯವಹಾರಗಳು ಹಾಗೂ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಅರುಣಾಚಲ ಪ್ರದೇಶ ಹೊಸ ಪರಿವರ್ತನೆ ಕಂಡಿದೆ. ಟ್ರಾನ್ಸ್ ಅರುಣಾಚಲ ಹೆದ್ದಾರಿ ಕಾಮಗಾರಿ ಶೀಘ್ರದಲ್ಲೇ ಪೂರ್ಣಗೊಳ್ಳಲಿದ್ದು, ಈ ಹೆದ್ದಾರಿ ರಾಜ್ಯದ ಪ್ರತಿಯೊಂದು ಜಿಲ್ಲಾಕೇಂದ್ರಗಳನ್ನು ಸಂಪರ್ಕಿಸಲಿದೆ ಎಂದು ಹೇಳಿದರು. ರಾಜ್ಯದಲ್ಲಿ ೪೨ ಸಾವಿರ ಕೋಟಿ ರೂಪಾಯಿ ವೆಚ್ಚದ ಗಡಿನಾಡು ಹೆದ್ದಾರಿ ಯೋಜನೆಗೆ ಕೇಂದ್ರ ಸರ್ಕಾರ ೪೨

ಸಾವಿರ ಕೋಟಿ ರೂಪಾಯಿ ಅನುಮೋದನೆ ನೀಡಿದೆ. ಈ ಪ್ರಮಾಣದಲ್ಲಿ ಹಣ ಮಂಜೂರು ಮಾಡಿದ ದೇಶದ ಮೊದಲ ರಸ್ತೆ ಯೋಜನೆ ಇದ್ದಾಗಿದ್ದು, ಇದು ಪ್ರಧಾನಿ ನರೇಂದ್ರ ಮೋದಿ ಅವರಿಂದ ಮಾತ್ರ ಸಾಧ್ಯ ಎಂದು ಸಚಿವ ರಿಜಿಜು ಹೇಳಿದರು.

<><><><>

ಬಿಹಾರದಲ್ಲಿ ಮುಖ್ಯಮಂತ್ರಿ ನೀತಿಶ್ ಕುಮಾರ್ ನೇತೃತ್ವದ ಸಚಿವ ಸಂಪುಟ ಇಂದು ವಿಸ್ತರಣೆಯಾಯಿತು. ಸಚಿವ ಸಂಪುಟಕ್ಕೆ ೭ ಮಂದಿ ಹೊಸ ಸಚಿವರನ್ನು ಸೇರ್ಪಡೆ ಮಾಡಿಕೊಳ್ಳಲಾಯಿತು. ಪಾಟ್ನಾದ ರಾಜಭವನದಲ್ಲಿ ನಡೆದ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ರಾಜ್ಯಪಾಲ ಅರಿಫ್ ಮೊಹಮ್ಮದ್ ಖಾನ್ ಅವರು, ಬಿಜೆಪಿ ಕೋಟಾದ ೭ ಶಾಸಕರಿಗೆ ಪ್ರಮಾಣವಚನ ಬೋಧಿಸಿದರು. ಪ್ರಮಾಣವಚನ ಸ್ವೀಕರಿಸಿದ ಹೊಸ ಸಚಿವರಲ್ಲಿ ಸಂಜಯ್ ಸರೋಗಿ, ಕೃಷ್ಣಕುಮಾರ್ ಮಂಟು, ಡಾ. ಸುನೀಲ್ ಕುಮಾರ್, ಮೋತಿಲಾಲ್ ಪ್ರಸಾದ್, ರಾಜಕುಮಾರ್ ಸಿಂಗ್, ವಿಜಯ್‌ಕುಮಾರ್ ಮಂಡಲ್ ಮತ್ತು ಜಿವೇಶ್ ಕುಮಾರ್ ಸೇರಿದ್ದಾರೆ. ಇಂದಿನ ಸಚಿವ ಸಂಪುಟ ವಿಸ್ತರಣೆಯೊಂದಿಗೆ ನೀತಿಶ್ ಕುಮಾರ್ ನೇತೃತ್ವದ ಸಚಿವ ಸಂಪುಟದ ಸಂಖ್ಯೆ ಮುಖ್ಯಮಂತ್ರಿ ಸೇರಿದಂತೆ ೩೬ಕ್ಕೆ ತಲುಪಿದೆ. ಇದಕ್ಕೂ ಮುನ್ನ ಇಂದು ಬೆಳಗ್ಗೆ ಬಿಹಾರ ರಾಜ್ಯ ಬಿಜೆಪಿ ಘಟಕದ ಅಧ್ಯಕ್ಷ ದಿಲೀಪ್ ಜೈಸ್ವಾಲ್ ಅವರು, ತಮ್ಮ ಪಕ್ಷದ 'ಒಬ್ಬ ವ್ಯಕ್ತಿ ಒಂದು ಹುದ್ದೆ' ನೀತಿಗೆ ಅನುಗುಣವಾಗಿ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.

<><><><>

ರಾಷ್ಟ್ರೀಯ ಕ್ರೀಡಾ ಒಕ್ಕೂಟಗಳಿಗೆ ಆರ್ಥಿಕ ಸಹಾಯ ಕಲ್ಪಿಸುವ ಮಾನದಂಡಗಳನ್ನು ಪರಿಷ್ಕರಿಸಲು ಸರ್ಕಾರ ೬ ಸದಸ್ಯರ ಸಮಿತಿಯನ್ನು ರಚಿಸಿದೆ. ಕೇಂದ್ರ ಯುವಜನ ವ್ಯವಹಾರ ಹಾಗೂ ಕ್ರೀಡಾ ಸಚಿವಾಲಯದ ಜಂಟಿ ಕಾರ್ಯದರ್ಶಿ ಕುನಾಲ್ ನೇತೃತ್ವದಲ್ಲಿ ಈ ಸಮಿತಿ ಕಾರ್ಯ ನಿರ್ವಹಿಸಲಿದೆ ಎಂದು ಸಚಿವಾಲಯ ತಿಳಿಸಿದೆ.

<><><><>

ಗೈನ್ ಬಿಟ್ ಕಾಯಿನ್ ಹಗರಣದಲ್ಲಿ ಕೇಂದ್ರೀಯ ತನಿಖಾ ಸಂಸ್ಥೆ - ಸಿಬಿಐ ಸುಮಾರು ೨೪ ಕೋಟಿ ರೂಪಾಯಿ ಮೌಲ್ಯದ ಕ್ರಿಪ್ಟೋ ಕರೆನ್ಸಿಗಳನ್ನು ವಶಪಡಿಸಿಕೊಂಡಿದೆ. ಗೈನ್ ಬಿಟ್ ಕಾಯಿನ್ ಪ್ರಕರಣಗಳಿಗೆ ಸಂಬಂಧಿಸಿದಂತೆ ತನ್ನ ತನಿಖಾ ತಂಡಗಳು ದೇಶಾದ್ಯಂತ ೬೦ ಸ್ಥಳಗಳಲ್ಲಿ ಶೋಧನೆ ನಡೆಸಿವೆ ಎಂದು ಸಿಬಿಐ ಹೇಳಿಕೆಯಲ್ಲಿ ತಿಳಿಸಿದೆ. ದೆಹಲಿ, ಪುಣೆ, ನಾಂದೇಡ್, ಮುಂಬೈ, ಕೊಲ್ಲಾಪುರ, ಬೆಂಗಳೂರು, ಚಂಡೀಗಢ, ಮೊಹಾಲಿ, ಝಾನ್ಸಿ ಹಾಗೂ ಹುಬ್ಬಳ್ಳಿ ಸೇರಿದಂತೆ ೬೦ ಸ್ಥಳಗಳಲ್ಲಿ ಶೋಧನೆ ನಡೆಸಲಾಯಿತು. ಶೋಧನೆಯ ಸಮಯದಲ್ಲಿ ಸಿಬಿಐ ಅಧಿಕಾರಿಗಳು ಕ್ರಿಪ್ಟೋ ವ್ಯಾಲೆಟ್‌ಗಳು, ಡಿಜಿಟಲ್ ಸಾಕ್ಷ್ಯಗಳು, ೩೪ ಲ್ಯಾಪ್‌ಟಾಪ್‌ಗಳು, ೧೨ ಮೊಬೈಲ್ ಫೋನ್‌ಗಳು, ಡಿಜಿಟಲ್ ಸಾಧನಗಳು, ಇಮೇಲ್‌ಗಳು/ಕ್ಲೌಡ್ ಸ್ಟೋರೇಜ್‌ಗಳು ಸೇರಿದಂತೆ ೨೩.೯೪ ಕೋಟಿ ರೂಪಾಯಿಗಳ ಕ್ರಿಪ್ಟೋ ಕರೆನ್ಸಿಗಳನ್ನು ವಶಪಡಿಸಿಕೊಳ್ಳಲಾಗಿದೆ.

<><><><>

ಸುಡಾನ್‌ನ ಓಂಡರ್ಮನ್ ನಗರದಲ್ಲಿ ಸಂಭವಿಸಿದ ಸೇನಾ ವಿಮಾನ ಅಪಘಾತದಲ್ಲಿ ಮೃತಪಟ್ಟವರ ಸಂಖ್ಯೆ ೪೬ಕ್ಕೆ ಏರಿಕೆಯಾಗಿದೆ. ರಾಜಧಾನಿ ಖಾರ್ಟೋಮ್‌ನ ಅವಳಿ ನಗರ ಓಂಡರ್ಮನ್ ಉತ್ತರ ದಿಕ್ಕಿನಲ್ಲಿರುವ ವಾಡಿ ಸಹೀದ್ನಾ ವಾಯುನೆಲೆಯಿಂದ ಹಾರಾಟ ಆರಂಭಿಸಿದಾಗ ವಿಮಾನ ಪತನಗೊಂಡಿದೆ ಎಂದು ಸೇನೆ ಹೇಳಿಕೆಯಲ್ಲಿ ತಿಳಿಸಿದೆ.

<><><><>

ಮಹಿಳಾ ಟಿ-೨೦ ಪ್ರೀಮಿಯರ್ ಲೀಗ್‌ನಲ್ಲಿಂದು ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ೧೧ನೇ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡವು ಯುಪಿ ವಾರಿಯರ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ಇದೀಗ ಆರಂಭಗೊಂಡಿದೆ. ಮೊದಲು ಟಾಸ್ ಗೆದ್ದು ಮುಂಬೈ ಇಂಡಿಯನ್ಸ್ ಫೀಲ್ಡಿಂಗ್ ಆಯ್ದುಕೊಂಡಿದೆ. ಎರಡೂ ತಂಡಗಳು ೪ ಪಾಯಿಂಟ್‌ಗಳೊಂದಿಗೆ ಸಮಬಲ ಸಾಧಿಸಿದ್ದು, ಉಭಯ ತಂಡಗಳು ಪಾಯಿಂಟ್ ಪಟ್ಟಿಯಲ್ಲಿ ಮೇಲಕ್ಕೆ ಜಿಗಿಯುವ ಗುರಿ ಹೊಂದಿರುವುದರಿಂದ ಪಂದ್ಯವು ಎರಡೂ ತಂಡಗಳಿಗೆ ನಿರ್ಣಾಯಕವಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>